## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 521(636) |
| ಉತ್ತರಿಸಬೇಕಾದ ದಿನಾಂಕ | 20.02.2024 |
| ಉತ್ತರಿಸಬೇಕಾದವರು | ಮಾನ್ಯ ನಗರಾಭಿವೃದ್ಧಿ ಹಾಗೂ ನಗರ ಯೋಜನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿನ ತುಂಡು ಜಾಗ ಮಂಜೂರಾತಿ ಮಾಡುವುದಕ್ಕೆ ಸರ್ಕಾರ ಆದೇಶ ಹೊರಡಿಸಿ: ತಡೆಹಿಡಿಯಲಾಗಿದೆಯೇ; | ಸರ್ಕಾರದ ಪತ್ರ ಸಂಖ್ಯೆ: ನಅಇ 71 ಮೈಅಪ್ರಾ 2023(ಇ) ದಿನಾಂಕ:14.03.2023ರಲ್ಲಿ ತುಂಡು ಭೂಮಿ ಹಂಚಿಕೆ ಕುರಿತು ಮಾರ್ಗಸೂಚಿ ತಯಾರಿಸುವವರೆಗೂ ಇಂತಹ ಪ್ರಕರಣಗಳಲ್ಲಿ ಯಾವುದೆ ನಿರ್ಣಯಗಳನ್ನು ಕೈಗೊಳ್ಳದಂತೆ ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರಕ್ಕೆ ನಿರ್ದೇಶನ ನೀಡಲಾಗಿರುತ್ತದೆ. |
| ಆ) | ಪ್ರಾಧಿಕಾರದ ತುಂಡು ಜಾಗವನ್ನು ಅಸುಪಾಸಿನ ಜನತೆ ಅನಧಿಕೃತವಾಗಿ ಬಳಕೆ ಮಾಡಿಕೊಂಡಿರುವುದು, ಯಾವುದೇ ಪರವಾನಗಿ ಪಡೆಯದೇ ಕಾಂಪೌಂಡ್ ಮತ್ತು ಕಟ್ಟಡಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಾಧಿಕಾರದಿಂದ ಮಂಜೂರು ಮಾಡಿದ ನಿವೇಶನಕ್ಕೆ ಹೊಂದಿಕೊಂಡಂತೆ ಹೆಚ್ಚುವರಿ ಜಾಗವಿದ್ದಲ್ಲಿ(ತುಂಡುಜಾಗ) ಅದನ್ನು ಕೆಲವು ನಿವೇಶನದ ಮಾಲೀಕರು ಕಾಂಪೌಂಡ್ ಮತ್ತು ಕಟ್ಟಡಗಳನ್ನು ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇಂತಹ ಪ್ರಕರಣಗಳನ್ನು ಗುರುತಿಸಿ ತೆರವುಗೊಳಿಸಲು ಪ್ರಾಧಿಕಾರದಿಂದ ಕ್ರಮವಹಿಸಲಾಗುತ್ತಿದೆ. |
| ಇ) | ಇದರಿಂದಾಗಿ ಪ್ರಾಧಿಕಾರಕ್ಕೆ ತುಂಬಾ ಆರ್ಥಿಕ ನಷ್ಟ ಉಂಟಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಈ) | ತುಂಡು ಜಾಗ ಮಂಜೂರಾತಿಯನ್ನು ತಡೆಹಿಡಿಯಲು ಕಾರಣಗಳೇನು; | ಕಾಯ್ದೆ ಅಥವಾ ನಿಯಮಗಳಲ್ಲಿ ಯಾವುದೇ ಅವಕಾಶಗಳು ಇಲ್ಲದಿರುವುದರಿಂದ ತುಂಡು ಭೂಮಿ ಹಂಚಿಕೆಯ ಕುರಿತು ಮಾರ್ಗಸೂಚಿ ತಯಾರಿಸುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. |
| ಉ) | ಯಾವ ಕಾಲಮಿತಿಯಲ್ಲಿ ತುಂಡು ಜಾಗ ಮಂಜೂರಾತಿಗೆ ಸರ್ಕಾರ ಅನುಮತಿ ನೀಡಲಾಗುವುದು? | |

ಸಂಖ್ಯೆ : ನಅಇ 56 ಮೈಅಪ್ರಾ 2024(ಇ)

19/02/2024

**(ಬಿ.ಎಸ್ ಸುರೇಶ)**

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು